ಕನ್ನಡಪ್ರಭ
ಸೋಮವಾರ 4.05.2026

ಗರಿಷ್ಠ 39°c | ಕನಿಷ್ಠ 27°c

ಸುದ್ದಿ ಸಿಂಚನ

ನವಗ್ರಹ ಪ್ರಾಣ ಪ್ರತಿಷ್ಠಾಪನೆ, ಕಳಸಾರೋಹಣಕ್ಕೆ ಚಾಲನೆ



ಕಂಪ್ಲಿ: ತಾಲೂಕಿನ ಸೋಮಲಾಪುರ ಗ್ರಾಮದಲ್ಲಿ ಆಂಜನೇಯಸ್ವಾಮಿ ಹಾಗೂ ಬುಡ್ಡೇಲಿಂಗೇಶ್ವರ ದೇವಸ್ಥಾನದ ಪುನರ್ ನಿರ್ಮಾಣದ ಅಂಗವಾಗಿ ನವಗ್ರಹ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಮಹೋತ್ಸವ ಕಾರ್ಯಕ್ರಮಗಳು ಗುರುವಾರ ಶ್ರದ್ಧಾ ಭಕ್ತಿಯಿಂದ ಜರುಗಿದವು. ಬುಕ್ಕಸಾಗರದ ಕರಿಸಿದ್ದೇಶ್ವರ ವಿಶ್ವಾರಾಧ್ಯ ಶಿವಾಚಾರ್ಯರು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಮಕ್ಕಳಿಗೆ ಬಾಲ್ಯದಲ್ಲಿಯೇ ಒಳ್ಳೆಯ ಸಂಸ್ಕಾರ, ನೀತಿ-ನಿಲುವುಗಳನ್ನು ಕಲಿಸಿದಲ್ಲಿ ಮಾತ್ರ ಅವರು ಭವಿಷ್ಯದಲ್ಲಿ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಂಡು ಸಮಾಜಕ್ಕೆ ಮಾದರಿಯಾಗುತ್ತಾರೆ. ಇಂದಿನ ಕಾಲಘಟ್ಟದಲ್ಲಿ ಶಿಕ್ಷಣದ ಜೊತೆಗೆ ಮೌಲ್ಯಾಧಾರಿತ ಜೀವನ ಶೈಲಿ ಅತ್ಯಗತ್ಯವೆಂದು ಒತ್ತಿ ಹೇಳಿದರು. ಕಾರ್ಯಕ್ರಮದಲ್ಲಿ ದೇವಸಮುದ್ರದ ಗುರುಶಾಂತಯ್ಯ ಸ್ವಾಮಿಗಳ ಪೌರೋಹಿತ್ಯದಲ್ಲಿ ಪ್ರಾಣ ಪ್ರತಿಷ್ಠಾಪನೆ ವಿಧಿವಿಧಾನಗಳು ಭಕ್ತಿಭಾವದಿಂದ ನೆರವೇರಿದವು.

ಕಾರ್ಮಿಕರ ದಿನಾಚರಣೆ



ಕೊಟ್ಟೂರು: ರಕ್ತದಾನ ಮಹಾದಾನವಾಗಿದೆ. ಈ ಪ್ರಕ್ರಿಯೆಯಿಂದ ಬಡರೋಗಿಗಳ ಜೀವ ರಕ್ಷಣೆಗೆ ಸಹಕಾರಿಯಾಗುತ್ತದೆ ಎಂದು ಸಮಾಜ ಸೇವಕ ರಾಜೇಶ್ ಕರ್ವ ಹೇಳಿದರು. ಪಟ್ಟಣದ ಬಸ್ ನಿಲ್ದಾಣದ ಹತ್ತಿರ ನಾಗರಾಜ್ ಶಾಲೆಯಲ್ಲಿ ಅಂತರಾಷ್ಟ್ರೀಯ ಕಾರ್ಮಿಕರ ದಿನಾಚರಣೆ ಅಂಗವಾಗಿ ಹಸಿರು ಹೊನಲು ಸೇವಾ ಸಂಸ್ಥೆ, ಸ್ವಾಮಿ ವಿವೇಕಾನಂದ ಚಾರಿಟೇಬಲ್ ರಕ್ತ ಭಂಡಾರ ಸಹಯೋಗದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರದಲ್ಲಿ ಅವರು ಮಾತನಾಡಿದರು. ಇಲ್ಲಿವರೆಗೆ ಸುಮಾರು 84 ಬಾರಿ ರಕ್ತದಾನ ಮಾಡಿದ್ದು, ತಮಗೆ ಇದುವರೆಗೆ ಯಾವುದೇ ಅನಾರೋಗ್ಯ ಕಾಡಿಲ್ಲ ಎಂದರು. ನಿವೃತ್ತ ಪೌರಕಾರ್ಮಿಕರನ್ನು ಸನ್ಮಾನಿಸಲಾಯಿತು. ನಂತರ ರಕ್ತದಾನ ಶಿಬಿರದಲ್ಲಿ ನೂರಾರು ಮಂದಿ ಪಾಲ್ಗೊಂಡರು. ಕೊಟ್ಟೂರಿನ ಮರಬದ ನಾಗರಾಜ ಮೇ 1ರಂದು ಅವರ ಹುಟ್ಟಿದ ದಿನವಾಗಿದ್ದ ತಮ್ಮ ಪತ್ನಿಯ ಜೊತೆಗೆ ರಕ್ತದಾನ ಶಿಬಿರಕ್ಕೆ ಬಂದು ರಕ್ತದಾನ ಮಾಡುವ ಮೂಲಕ ಹುಟ್ಟುಹಬ್ಬವನ್ನು ಈ ರೀತಿ ಆಚರಿಸಿಕೊಂಡರು. ಸಂಸ್ಥೆಯ ಸಿ. ಬಸವರಾಜ್, ಎಸ್.ಗುರುರಾಜ್, ಬಿ.ಆರ್. ವಿಕ್ರಂ, ಅಜಯ್ ದೇವರಮನಿ, ಸಿದ್ದೇಶ್ ಬಂಜಾರ್, ನಾಗರಾಜ್, ಪತ್ತಿಕೊಡ ಪ್ರಶಾಂತ, ರೇವಡಿ ನಾಗಭೂಷಣ್, ಎಚ್.ವಿಜಯಕುಮಾರ್, ತೆಗ್ಗಿನಕೇರಿ ಕೊಟ್ರೇಶ್, ಎಂ.ನವೀನಕುಮಾರ್, ಚೇತನ್ ಜೈನ್, ಸಿದ್ದೇಶ್, ಕೆ.ಎಂ. ರಮೇಶ್, ಶಫಿ, ಶಿಕಾಪುರಿ ನವೀನಕುಮಾರ್, ಎಂ.ಎಂ. ಜಡೇಸ್ವಾಮಿ, ಕವೀಂದ್ರ, ಉದಯಕುಮಾರ್, ದೊಡ್ಡ ಕೊಟ್ರೇಶ್, ಎಂ.ಎಸ್. ಅಭಿಷೇಕ್, ಸ್ವೀಟ್ ಬಸವರಾಜ್, ನಾಗರಾಜ್, ಸಚಿನ್ ಕೂಡ್ಲಿಗಿ, ಸ್ವರೂಪ್, ಪರಶುರಾಮ್ ಇದ್ದರು.

ಕರೆಂಟ್ ಗೋಪಾಲಪ್ಪ ನಿಧನ



ಕಂಪ್ಲಿ: ತಾಲೂಕಿನ ರಾಮಸಾಗರದ ವಾಲ್ಮೀಕಿ ಸಮುದಾಯದ ಮುಖಂಡ ಕರೆಂಟ್ ಗೋಪಾಲಪ್ಪ (68) ಶನಿವಾರ ರಾತ್ರಿ ಅನಾರೋಗ್ಯದಿಂದ ನಿಧನರಾದರು. ಮೃತರಿಗೆ ಇಬ್ಬರು ಪುತ್ರರು, ಪುತ್ರಿ ಇದ್ದಾರೆ. ಗ್ರಾಮದಲ್ಲಿ ಭಾನುವಾರ ಅಂತ್ಯಸಂಸ್ಕಾರ ನಡೆಯಿತು.



ಕೊಟ್ಟೂರಿನ ಕೊಟ್ಟೂರೇಶ್ವರ ಮಹಾವಿದ್ಯಾಲಯದಲ್ಲಿ ಎಂಕಾಂ ವಿಭಾಗದವರು ಆಯೋಜಿಸಿದ ಆಹಾರೋತ್ಸವದಲ್ಲಿ ವಿದ್ಯಾರ್ಥಿಗಳು ತಯಾರಿಸಿದ ತಿಂಡಿ ತಿನಿಸುಗಳು ಗಮನ ಸೆಳೆದವು. ಈ ವೇಳೆ ಡಾ.ಎಂ.ರವಿಕುಮಾರ್ ಮತ್ತಿತರರು ಇದ್ದರು.



ಕಂಪ್ಲಿಯ ಅಂಬೇಡ್ಕರ್ ವೃತ್ತದಲ್ಲಿ ನಡೆದ ವಿಶ್ವ ಕಾರ್ಮಿಕರ ದಿನಾಚರಣೆಯಲ್ಲಿ ತಾಲೂಕು ಅಧ್ಯಕ್ಷ ಐ. ಹೊನ್ನೂರ್‌ಸಾಬ್, ಬಂಡಿ ಬಸವರಾಜ, ಆರ್. ನಾಗರಾಜ, ಮೆಹಬೂಬ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಾರ್ಮಿಕ ಹಕ್ಕುಗಳ ರಕ್ಷಣೆಗೆ ಒಗ್ಗಟ್ಟಿನ ಹೋರಾಟ ಅಗತ್ಯ

• **ಕನ್ನಡಪ್ರಭ ವಾರ್ತೆ** ಕಂಪ್ಲಿ

ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ವತಿಯಿಂದ ವಿಶ್ವ ಕಾರ್ಮಿಕರ ದಿನಾಚರಣೆಯನ್ನು ಶುಕ್ರವಾರ ಆಚರಿಸಲಾಯಿತು.

ಫೆಡರೇಷನ್‌ನ ತಾಲೂಕು ಅಧ್ಯಕ್ಷ ಐ. ಹೊನ್ನೂರ್‌ಸಾಬ್ ಮಾತನಾಡಿ, ದೇಶದಲ್ಲಿ ಜಾರಿಗೊಂಡಿರುವ ಕಾರ್ಮಿಕ ವಿರೋಧಿ ನಾಲ್ಕು ಕಾರ್ಮಿಕಸಂಹಿತೆಗಳನ್ನುತಕ್ಷಣರದ್ದುಗೊಳಿಸಬೇಕು. ಇವು ಕಾರ್ಮಿಕರ ಹಕ್ಕುಗಳನ್ನು ಕುಗ್ಗಿಸುವಂತಿದ್ದು, ದುಡಿಯುವ ವರ್ಗದ ಭವಿಷ್ಯಕ್ಕೆ ಅಪಾಯಕಾರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಿಐಟಿಯು ತಾಲೂಕು ಸಮಿತಿ ಸದಸ್ಯ ಬಂಡಿ ಬಸವರಾಜ, ಆರ್. ನಾಗರಾಜ, ಮೆಹಬೂಬ್, ರಂಗಯ್ಯ, ನಾಗರಾಜ, ಶಿವಕುಮಾರ್ ಇದ್ದರು.

ಹೊಸಪೇಟೆ ತಾಲೂಕಿನ ಎಲ್ಲ ಕೆರೆಗೆ ನೀರು ತುಂಬಿಸಲು ಆಗ್ರಹ

ಸಕ್ಕರೆ ಕಾರ್ಖಾನೆ ಆರಂಭಿಸುವಂತೆ ರೈತ ಸಂಘ ಒತ್ತಾಯ



ಹೊಸಪೇಟೆ ತಾಲೂಕಿನಲ್ಲಿ ಬರುವಂತಹ ಎಲ್ಲ ಕೆರೆಗಳಿಗೆ ನೀರು ತುಂಬಿಸುವಂತೆ ಮತ್ತು ಸಕ್ಕರೆ ಕಾರ್ಖಾನೆ ಆರಂಭಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘದಿಂದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

- ಈ ಹಿಂದೆ ₹247 ಕೋಟಿ ಅನುದಾನ ಬಿಡುಗಡೆಯಾಗಿ ಅದರ ಸಂಪೂರ್ಣ ಕೆಲಸ ಮುಗಿದಿದೆ ಎಂದು ಅನುದಾನ ಪಡೆದುಕೊಂಡ ಗುತ್ತಿಗೆದಾರರ ವಿರುದ್ಧ ಮತ್ತು ಇದನ್ನು ಪರಿಶೀಲಿಸಿದ ಸರ್ಕಾರಿ ಅಧಿಕಾರಿಗಳ ವಿರುದ್ಧ ಸೂಕ್ತ ತನಿಖೆಯನ್ನು ಹೊಸ ತನಿಖಾಧಿಕಾರಿ ನೇಮಿಸುವುದರ ಜೊತೆಗೆ ಶಿಸ್ತಿನ ಕ್ರಮ ವಹಿಸಬೇಕು
- ನವಲಿ ಹತ್ತಿರ ಸಮನಾಂತರ ಜಲಾಶಯವನ್ನು ನಿರ್ಮಿಸುವಂತೆ ಈ ಭಾಗದ ಎಲ್ಲ ರೈತರು ಒತ್ತಾಯಿಸಿದರೂ ಪ್ರಯೋಜನವಾಗಿಲ್ಲ

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ತಾಲೂಕಿನಲ್ಲಿ ಬರುವಂತಹ ಎಲ್ಲ ಕೆರೆಗಳಿಗೆ ನೀರು ತುಂಬಿಸುವಂತೆ ಮತ್ತು ಈ ಭಾಗದಲ್ಲಿ ಸಕ್ಕರೆ ಕಾರ್ಖಾನೆ ಆರಂಭಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಮುಖಂಡರು ಭಾನುವಾರ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ನೀಡಿ ಒತ್ತಾಯಿಸಿದರು.

ಹೊಸಪೇಟೆ ತಾಲೂಕು ವ್ಯಾಪ್ತಿಯಲ್ಲಿ ಬರುವ ಪಿ.ಕೆ.ಹಳ್ಳಿ ಕೆರೆ, ನಲ್ಲಾಪುರ ಕೆರೆ, ಚಿನ್ನಾಪುರ ಕೆರೆ, ಸುಂಕ್ಲಮ್ಮ ಕೆರೆ, ಬೈಲುವದ್ದಿಗೇರಿ ಕೆರೆ, ಕಾಕುಬಾಳುಕೆರೆ, ಗುಂಡ್ಲವದ್ದಿಗೇರಿ ಕೆರೆ, ಶಟ್ಟಿಹಳ್ಳಿಕೆರೆ, ವಡ್ಡರಹಳ್ಳಿಕೆರೆ, ಗಾದಿಗನೂರು ಕೆರೆ, ಇಂಗಳಿಗಿ ಕೆರೆ, ಕಮಲಾಪುರ ಕೆರೆ, ಮತ್ತು ರಾಯರಕೆರೆ ಸೇರಿದಂತೆ ಇನ್ನಿತರ ಹಲವು ಕೆರೆಗಳನ್ನು ಸರ್ಕಾರದ ಅನುದಾನದಿಂದ ಏತ ನೀರಾವರಿ ಯೋಜನೆಗಾಗಿ 2022-23ನೇ ಸಾಲಿನಲ್ಲಿ ಸುಮಾರು ₹247 ಕೋಟಿ ಅನುದಾನ ಬಿಡುಗಡೆ ಮಾಡಿ, ಟೆಂಡರ್ ಪ್ರಕ್ರಿಯೆಯು ಮುಗಿದಿದ್ದು, ಈ ಕಾಮಗಾರಿಯ ಗುತ್ತಿಗೆದಾರರು ಮತ್ತು ಸಹ ಗುತ್ತಿಗೆದಾರರು ಬೃಹತ್ ಜಲಮಂಡಳಿಯೊಂದಿಗೆ ಸೇರಿಕೊಂಡು ಪೈಪ್‌ಲೈನ್ ಕಳಪೆ ಕಾಮಗಾರಿ ಮಾಡಿದ್ದಾರೆ.

ಈ ಹಿಂದೆ ₹247 ಕೋಟಿ ಅನುದಾನ ಬಿಡುಗಡೆಯಾಗಿ ಅದರ ಸಂಪೂರ್ಣ ಕೆಲಸ ಮುಗಿದೆದೆ ಎಂದು ಅನುದಾನ ಪಡೆದುಕೊಂಡ ಗುತ್ತಿಗೆದಾರರ ವಿರುದ್ಧ ಮತ್ತು ಇದನ್ನು ಪರಿಶೀಲಿಸಿದ ಸರ್ಕಾರಿ ಅಧಿಕಾರಿಗಳ ವಿರುದ್ಧ ಸೂಕ್ತ ತನಿಖೆಯನ್ನು ಹೊಸ ತನಿಖಾಧಿಕಾರಿ ನೇಮಿಸುವುದರ ಜೊತೆಗೆ ಶಿಸ್ತಿನ ಕ್ರಮ ವಹಿಸಬೇಕು. ನವಲಿ ಹತ್ತಿರ ಸಮನಾಂತರ ಜಲಾಶಯವನ್ನು ನಿರ್ಮಿಸುವಂತೆ ಈ ಭಾಗದ ಎಲ್ಲ ರೈತರು ಒತ್ತಾಯಿಸಿದರೂ ಪ್ರಯೋಜನವಾಗಿಲ್ಲ.

ನವಲಿ ಸಮನಾಂತರ ಜಲಾಶಯವಾದರೆ ಸುಮಾರು 30 ಟಿಎಂಸಿಗೂ ಹೆಚ್ಚು ನೀರು ಸಂಗ್ರಹವಾಗುತ್ತದೆ. ಹೊಸಪೇಟೆ ಭಾಗದಲ್ಲಿ ಸ್ಥಳೀಯ ಸಕ್ಕರೆ ಕಾರ್ಖಾನೆ 2015-16ನೇ ಸಾಲಿನಲ್ಲಿ ಮುಚ್ಚಿ ಹೋಗಿದ್ದು, ಈ ಭಾಗದಲ್ಲಿ ಸುಮಾರು 4 ರಿಂದ 5 ಲಕ್ಷ ಟನ್‌ನಷ್ಟು ಕಬ್ಬು ಬೆಳೆಯುತ್ತಿದ್ದು, 10-12 ವರ್ಷಗಳಿಂದ ಮುಂಡರಗಿ, ಸಿರುಗುಪ್ಪ, ಮೈಲಾರ, ಈ ಭಾಗದಲ್ಲಿ ಸ್ಥಳೀಯ ಕಬ್ಬನ್ನು ಸಾಗಾಟ ಮಾಡುತ್ತಿದ್ದು, ಪ್ರತಿ ಒಂದು ಟನ್ ಕಬ್ಬಿಗೆ ₹800 ರಿಂದ ₹1000 ನಷ್ಟವಾಗುತ್ತಿದೆ.

2023-24ನೇ ಸಾಲಿನಲ್ಲಿ ಚುನಾವಣೆ ಪೂರ್ವದಲ್ಲಿ ಸಿದ್ದರಾಮಯ್ಯ ಹೊಸಪೇಟೆಯಲ್ಲಿ ಎಚ್.ಆರ್. ಗವಿಯಪ್ಪ ಪರವಾಗಿ ಚುನಾವಣಾ ಭಾಷಣ ಮಾಡಿ, ನೀವು ನಮ್ಮ ಸರ್ಕಾರಕ್ಕೆ ಬೆಂಬಲ ನೀಡುವುದಾದರೆ ಆದಷ್ಟು ಬೇಗನೆ ಒಂದು ವರ್ಷದೊಳಗಾಗಿ ಸಕ್ಕರೆ ಕಾರ್ಖನೆಯನ್ನು ಪ್ರಾರಂಭಗೊಳಿಸುವುದಾಗಿ ಭರವಸೆ ನೀಡಿದ್ದರು.

ಇಲ್ಲಿಗೆ 3 ವರ್ಷಗಳು ಆದರೂ ಸಕ್ಕರೆ ಕಾರ್ಖಾನೆಯ ಬಗ್ಗೆ ಮುಖ್ಯಮಂತ್ರಿಯಾಗಲಿ, ಸಚಿವರಾಗಲಿ, ಶಾಸಕರಾಗಲಿ ಹಾಗೂ ಸ್ಥಳೀಯ ಸರ್ಕಾರಿ ಅಧಿಕಾರಿಗಳಾಗಲಿ ಇದರ ಬಗ್ಗೆ ಯಾವುದೇ ಚಕಾರ ಎತ್ತುತ್ತಿಲ್ಲ. ರೈತ ಸಂಘದಿಂದ ರಾಜ್ಯದ ಸಚಿವರಿಗೂ ಮನವಿ ನೀಡಿ ಒತ್ತಾಯಿಸಿದರೂ ಪ್ರಯೋಜನವಾಗಿಲ್ಲ. ಈ ಬಗ್ಗೆ ಸೂಕ್ತ ಕ್ರಮ ವಹಿಸಬೇಕು.

ತಕ್ಷಣವೇ ಹೊಸಪೇಟೆ ಭಾಗಕ್ಕೆ ಸಕ್ಕರೆ ಕಾರ್ಖಾನೆ ಪ್ರಾರಂಭಿಸುವಂತೆ ರೈತ ಸಂಘದ ಜಿಲ್ಲಾಧ್ಯಕ್ಷ ಟಿ. ನಾಗರಾಜ, ತಾಲೂಕು ಅಧ್ಯಕ್ಷ ಸಣ್ಣಕ್ಕಿ ರುದ್ರಪ್ಪ ಸೇರಿದಂತೆ ಅನೇಕ ರೈತರು ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಬಳ್ಳಾರಿಯಲ್ಲಿ ನೀಟ್ ಪರೀಕ್ಷೆಗೆ 3945 ಅಭ್ಯರ್ಥಿಗಳು ಹಾಜರು



ಬಳ್ಳಾರಿಯ ಮುನ್ಸಿಪಲ್ ಕಾಲೇಜಿನ ಪರೀಕ್ಷಾ ಕೇಂದ್ರಕ್ಕೆ ಬಂದಿದ್ದ ಅಭ್ಯರ್ಥಿಗಳಿಗೆ ಸಿಬ್ಬಂದಿ ತಪಾಸಣೆ ಮಾಡಿ ಪರೀಕ್ಷಾ ಕೇಂದ್ರಕ್ಕೆ ಕಳಿಸಿದರು.

• **ಕನ್ನಡಪ್ರಭ ವಾರ್ತೆ** ಬಳ್ಳಾರಿ

ವೈದ್ಯಕೀಯ ಕೋರ್ಸ್ ಪ್ರವೇಶಕ್ಕಾಗಿ ನಡೆಸುವ ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆ (ನೀಟ್-ಯುಜಿ) ನಗರದ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಭಾನುವಾರ ಜರುಗಿತು.

ಅಖಂಡ ಬಳ್ಳಾರಿ ಜಿಲ್ಲೆಯ 4666 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿಯಾಗಿದ್ದರು. ಈ ಪೈಕಿ 3945 ಅಭ್ಯರ್ಥಿಗಳು ಪರೀಕ್ಷೆ ಹಾಜರಾದರು. 121 ಜನರು ಗೈರಾಗಿದ್ದರು. ಬಳ್ಳಾರಿಯ ಸರ್ಕಾರಿ ಮುನ್ಸಿಪಲ್ ಕಾಲೇಜು, ಸರಳಾದೇವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಾಲಿಟೆಕ್ನಿಕ್ ಕಾಲೇಜು, ಗರ್ಲ್ಸ್ ಕಾಲೇಜು ಸೇರಿದಂತೆ 11 ಕೇಂದ್ರಗಳಲ್ಲಿ ಪರೀಕ್ಷೆ ನಡೆದವು. ಮಧ್ಯಾಹ್ನ 2 ಗಂಟೆಗೆ ಪರೀಕ್ಷೆ ಆರಂಭಗೊಂಡಿತು.

ಪರಿಶೀಲನೆ ಹಿನ್ನೆಲೆಯಲ್ಲಿ ಎರಡು ಗಂಟೆ ಮುಂಚಿತವಾಗಿ ಬರಬೇಕು ಎಂದು ಸೂಚನೆ ನೀಡಲಾಗಿತ್ತು. ಹೀಗಾಗಿ ಪರೀಕ್ಷಾ ಕೇಂದ್ರಗಳ ಬಳಿ ಅಭ್ಯರ್ಥಿಗಳು ಪರೀಕ್ಷೆ ಮೊದಲೇ ಆಗಮಿಸಿದ್ದ ದೃಶ್ಯ ಕಂಡು ಬಂತು. ಐದು ನಿಮಿಷ ತಡವಾಗಿ ಬಂದವರನ್ನು ಸಹ ಪರೀಕ್ಷೆಗೆ ಅವಕಾಶ ಮಾಡಿಕೊಡದೆ ವಾಪಸ್ ಕಳಿಸಲಾಗಿದೆ.

- ಪರೀಕ್ಷಾ ಕೇಂದ್ರಗಳ ಬಳಿ ಅಭ್ಯರ್ಥಿಗಳು ಪರೀಕ್ಷೆ ಮೊದಲೇ ಆಗಮಿಸಿದ್ದ ದೃಶ್ಯ ಕಂಡು ಬಂತು
- ಐದು ನಿಮಿಷ ತಡವಾಗಿ ಬಂದವರನ್ನು ಸಹ ಪರೀಕ್ಷೆಗೆ ಅವಕಾಶ ಮಾಡಿಕೊಡದೆ ವಾಪಸ್ ಕಳಿಸಲಾಗಿದೆ

ಪರೀಕ್ಷೆ ನಿಯಮಗಳನ್ನು ಮೊದಲೇ ತಿಳಿಸಿದ್ದಾಗ್ಯೂ ಕೆಲವರು ತಡವಾಗಿ ಬಂದಿದ್ದರು. ಪರೀಕ್ಷಾ ಕೇಂದ್ರದಿಂದ ಹೊರ ಕಳಿಸುವುದು ಅನಿವಾರ್ಯವಾಗಿತ್ತು ಎಂದು ಪರೀಕ್ಷಾ ಕೇಂದ್ರದ ಅಧಿಕಾರಿಯೊಬ್ಬರು ಕನ್ನಡಪ್ರಭಕ್ಕೆ ಮಾಹಿತಿ ನೀಡಿದರು.

ಕಲಿಕೆಯಲ್ಲಿ ಪ್ರಾವೀಣ್ಯತೆ ಪಡೆಯಿರಿ

• **ಕನ್ನಡಪ್ರಭ ವಾರ್ತೆ** ಕೊಟ್ಟೂರು

ವಿದ್ಯಾರ್ಥಿಗಳು, ಮಹಿಳೆಯರು ತಮ್ಮ ವಿದ್ಯಾಭ್ಯಾಸ ಜತೆ ಸೃಜನಶೀಲತೆ, ಪ್ರಾಯೋಗಿಕ ಕಲಿಕೆಯನ್ನು ಕಲಿಯುವುದರಿಂದ ಬದುಕಿನ ಎಲ್ಲ ರಂಗದಲ್ಲೂ ಸಾಧನೆ ತೋರಬಹುದಾಗಿದೆ ಎಂದು ಕೊಟ್ಟೂರೇಶ್ವರ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಎಂ.ರವಿಕುಮಾರ್ ಹೇಳಿದರು. ಮಹಾವಿದ್ಯಾಲಯದಲ್ಲಿ ಎಂ.ಕಾಂ ವಿಭಾಗದಿಂದ ಆಯೋಜಿಸಿದ ಆಹಾರೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಿವೃತ್ತ ಪ್ರಾಚಾರ್ಯ ಆಲೂರು ನಾಗರಾಜ ಮಾತನಾಡಿ, ವಿದ್ಯಾರ್ಥಿಗಳು ತಯಾರಿಸಿದ ವಿವಿಧ ಖಾದ್ಯಗಳು ಅಡುಗೆ ತಯಾರಿಕೆಯಲ್ಲಿ ಅವರ ಪೂರ್ಣ ಪ್ರಮಾಣದ ಭಾಗವಹಿಸುವಿಕೆಯ ಲವಲವಿಕೆತೋರುತ್ತದೆ. ಜತೆಗೆನಿರ್ವಹಣಾ ಕೌಶಲ್ಯ ಬೆಳೆಸುತ್ತವೆ ಎಂದರು.

ಕಾಲೇಜು ಆಡಳಿತ ಮಂಡಳಿ ಸದಸ್ಯರಾದ ಟಿ.ಎಂ ಗಿರೀಶ್, ಗೂಳಿ ಮಲ್ಲಿಕಾರ್ಜುನ್, ಉಪನ್ಯಾಸಕರಾದ ಪೃಥ್ವಿರಾಜ್, ಕೊಟ್ರೇಶ್, ಸುರೇಶ್, ಶರಣೇಶ್ ಕೆ ಚೈತ್ರ ಜಿ.ಪಿ, ಶ್ರೀನಿವಾಸ ಸತ್ಯಣ್ಣ, ಭವಾನಿ ಮತ್ತಿತರರು ಇದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರು ಪರಂಪರೆಯ ತಿನಿಸು ಮತ್ತು ಆಧುನಿಕ ತಿಂಡಿ ತಿನುಸುಗಳನ್ನು ತಯಾರಿಸಿ ಪ್ರದರ್ಶಿಸಿದರು. ವಿದ್ಯಾರ್ಥಿಗಳು ತಯಾರಿಸಿದ ತಿನಿಸುಗಳು ನೆರೆದಿದ್ದವರ ನಾಲಿಗೆಯ ರುಚಿ ಹೆಚ್ಚಿಸಿ ಪ್ರಶಂಸೆ ಪಡೆಯುವಲ್ಲಿ ಆಹಾರೋತ್ಸವ ಯಶಸ್ವಿಯಾಗಿತು.

ಜೋಡಿ ಕಾದಂಬರಿಗಳ ಬಿಡುಗಡೆ ಕಾರ್ಯಕ್ರಮ



ಕಂಪ್ಲಿಯ ಲೇಖಕ ಬಂಗಿ ದೊಡ್ಡ ಮಂಜುನಾಥರ ಜೋಡಿ ಕಾದಂಬರಿಗಳನ್ನು ಕನ್ನಡ ಹಿತರಕ್ಷಕ ಸಂಘದ ಗೌರವಾಧ್ಯಕ್ಷ ಕ.ಮ.ಹೇಮಯ್ಯಸ್ವಾಮಿ ಬಿಡುಗಡೆಗೊಳಿಸಿದರು.

• **ಕನ್ನಡಪ್ರಭ ವಾರ್ತೆ** ಕಂಪ್ಲಿ

ಪಟ್ಟಣದ ಶ್ರೀಪೇಟೆ ಬಸವೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ತಾಲೂಕು ಕಸಾಪ ಕಾದಂಬರಿ ಲೋಕಾರ್ಪಣಾ ಸಮಾರಂಭ ಹಮ್ಮಿಕೊಂಡಿತ್ತು.

ಲೇಖಕ ಬಂಗಿ ದೊಡ್ಡ ಮಂಜುನಾಥ ರಚಿಸಿದ ಬೆಂಕಿಯ ಶೀತ ಮತ್ತು ಶೀತದ ಕಾವು ಜೋಡಿ ಕಾದಂಬರಿಗಳನ್ನುಕರ್ನಾಟಕಕಾರ್ಯನಿರತಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಎನ್.ವೀರಭದ್ರಗೌಡ ಸಮಾರಂಭಕ್ಕೆ ಚಾಲನೆ ನೀಡಿ, ಕೃತಿಗಳ ಶಿರೋನಾಮೆ ಆಸಕ್ತಿದಾಯಕವಾಗಿವೆ ಎಂದರು.

ಮಾಧ್ಯಮ ಉದ್ಯಮವಾಗಿದ್ದು ಪತ್ರಕರ್ತರಿಗೆ ವೇತನ ಕೊಡದೇ ವರದಿ ಮಾಡಲು ಕೊಡುತ್ತಿವೆ. ಹೀಗಾದರೆ ಪತ್ರಕರ್ತರ ಬದುಕಿನ ಸ್ಥಿತಿಯೇನು? ಪತ್ರಕರ್ತನಿಗೆ ಉತ್ತಮ ವೇತನ ನೀಡುವಂತಾಗುವ ಬದಲಾವಣೆ ಆಗಬೇಕಿದೆ ಎಂದರು. ಗಂಗಾವತಿಯ ಎಸ್.ಕೆ.ಎನ್.ಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕಿ ಡಾ.ಮುಮ್ತಾಜ್ ಬೇಗಂ ಜೋಡಿ ಕಾದಂಬರಿಗಳನ್ನು ವಿಮರ್ಶಿಸಿಮಾತನಾಡಿ, ಜಿಲ್ಲಾಧ್ಯಕ್ಷನಿಷ್ಠಿರುದ್ರಪ್ಪರವರು ಬಹಳ ಕಷ್ಟಪಟ್ಟು ಬಳ್ಳಾರಿಯಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ತಂದಿದ್ದು, ಉತ್ತರ ಕರ್ನಾಟಕದ ಹೆಮ್ಮೆಯಾಗಿದೆ ಎಂದರು. ಕಸಾಪ ಬಳ್ಳಾರಿ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಕನ್ನಡ ಹಿತರಕ್ಷಕ ಸಂಘದ ಗೌರವಾಧ್ಯಕ್ಷ ಕ.ಮ.ಹೇಮಯ್ಯಸ್ವಾಮಿ ಜೋಡಿ ಕಾದಂಬರಿಗಳನ್ನು ಬಿಡುಗಡೆಗೊಳಿಸಿದರು. ಶ್ರೀಪೇಟೆ ಬಸವೇಶ್ವರ ದೇವಸ್ಥಾನದ ಅಧ್ಯಕ್ಷ ಡಿ.ವೀರಪ್ಪ, ನಗರಾಭಿವೃದ್ಧಿ ಹೋರಾಟ ಸಮಿತಿ ಅಧ್ಯಕ್ಷ ಕೃಷ್ಣ ಎಸ್.ಪೋಳ್, ಪಿರಮಿಡ್ ಮಾಸ್ಟರ್‌ಕೋನೇರು ಶ್ರೀರಾಮಕೃಷ್ಣ, ಕಸಾಪ ತಾಲೂಕು ಅಧ್ಯಕ್ಷ ಷಣ್ಮುಖಪ್ಪ ಚಿತ್ರಗಾರ, ಲೇಖಕ ಬಂಗಿ ದೊಡ್ಡ ಮಂಜುನಾಥ, ಕಸಾಪ ಪದಾಧಿಕಾರಿಗಳಾದ ಅಂಬಿಗರ ಮಂಜುನಾಥ, ಎಸ್.ಡಿ.ಬಸವರಾಜ, ಎಲಿಗಾರ ವೆಂಕಟರೆಡ್ಡಿ, ಹಾದಿಮನಿ ಕಾಳಿಂಗವರ್ಧನ, ಅಶೋಕ ಕುಕನೂರು, ಎಸ್.ಶಾಮಸುಂದರರಾವು. ಯು.ಎಂ. ವಿದ್ಯಾಶಂಕರ, ಬಡಿಗೇರ ಜಿಲಾನ್‌ಸಾಬ್ ಸೇರಿ ಪದಾಧಿಕಾರಿಗಳು ಪಾಲ್ಗೊಂಡಿದ್ದರು. ಶಿಕ್ಷಕ ಜೀರು ಮಲ್ಲಿಕಾರ್ಜುನ ನಿರೂಪಿಸಿದರು.

ಸಂಭ್ರಮದ ವಡಕರಾಯ ರಥೋತ್ಸವ



ಹೊಸಪೇಟೆ ನಗರದ ಮೇನ್ ಬಜಾರ್‌ನಲ್ಲಿರುವ ವಡಕರಾಯ ದೇವಸ್ಥಾನದ ವಡಕರಾಯ, ರಂಗನಾಥ ಮಹಾರಥೋತ್ಸವ ನಡೆಯಿತು.

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ನಗರದ ಮೇನ್ ಬಜಾರ್‌ನಲ್ಲಿರುವ ಐತಿಹಾಸಿಕ ವಡಕರಾಯ ದೇವಸ್ಥಾನದ ವಡಕರಾಯ, ರಂಗನಾಥ ಸ್ವಾಮಿ ಮಹಾ ರಥೋತ್ಸವವು ಶುಕ್ರವಾರ ಸಂಜೆ ಸಾವಿರಾರು ಭಕ್ತರ ಹರ್ಷೋದ್ಗಾರದ ಮಧ್ಯೆ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ಜಾತ್ರಾ ಮಹೋತ್ಸವ ಅಂಗವಾಗಿ ದೇವಸ್ಥಾನದಲ್ಲಿ ಬೆಳಿಗ್ಗೆಯಿಂದಲೇ ವಿಶೇಷ ಪೂಜಾಕೈಂಕರ್ಯಗಳನ್ನು ನೆರವೇರಿಸಲಾಯಿತು. ಜಲಾಭಿಷೇಕ, ಪಂಚಾಮೃತಾಭಿಷೇಕ, ಮಹಾಮಂಗಳಾರತಿ, ನೈವೇದ್ಯ ಸಮರ್ಪಣೆ ಮಾಡಿ ಪವನ ಪುತ್ರ ಹನುಮಾನ್‌ನನ್ನು ಸ್ತುತಿಸಲಾಯಿತು. ದೇವರ ದರ್ಶನಕ್ಕಾಗಿ ಭಕ್ತರು ಸಾಲುಗಟ್ಟಿ ನಿಂತು ದೇವರಿಗೆ ಹಣ್ಣು ಕಾಯಿ ಅರ್ಪಿಸಿದರೆ, ಇನ್ನು ಕೆಲವರು ಹನುಮಾನ ಚಾಲೀಸ ಪಠಿಸಿ, ದೇವರ ಕೃಪೆಗೆ ಪಾತ್ರರಾದರು.

ನಗರದ ಕಬ್ಬೇರು ಪೇಟೆ ಹಾಗೂ ಚಿತ್ರಕೇರಿ ಯುವಕರು ರಥಕ್ಕೆ ಸನ್ನಿ ಹಾಕಿದರು. ವಿಕಾಸ ಯುವಕ ಮಂಡಳಿ ಹಾಗೂ ಗೆಳೆಯರ ಬಳಗದ ಸದಸ್ಯರು ರಥೋತ್ಸವದಲ್ಲಿ ಭಾಗಿಯಾದ ಭಕ್ತರಿಗೆ ಮಜ್ಜಿಗೆ ವಿತರಿಸಿದರು. ಹೊಸಪೇಟೆ ನಗರ ಸೇರಿದಂತೆ ಜಿಲ್ಲೆಯ ಮತ್ತು ಬಳ್ಳಾರಿ, ಕೊಪ್ಪಳ, ದಾವಣಗೇರೆ ಸೇರಿದಂತೆ ರಾಜ್ಯದ ವಿವಿಧ ಊರುಗಳಿಂದ ಭಕ್ತರು ಆಗಮಿಸಿ ರಥಕ್ಕೆಬಾಳೆ ಹಣ್ಣು, ಹೂವು ಅರ್ಪಿಸಿ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿಕೊಂಡರು.

ಅಭಿಮಾನೋತ್ಸವ | ಜಿಲ್ಲಾ ಬಿಜೆಪಿ ಅಧ್ಯಕ್ಷ ಸಂಜೀವ ರೆಡ್ಡಿ ಮಾಹಿತಿ

ಬಿಎಸ್‌ವೈ ಅಭಿಮಾನೋತ್ಸವಕ್ಕೆ ಜಿಲ್ಲೆಯಿಂದ 50 ಸಾವಿರ ಅಭಿಮಾನಿಗಳು

• **ಕನ್ನಡಪ್ರಭ ವಾರ್ತೆ** ಹಗರಿಬೊಮ್ಮನಹಳ್ಳಿ

ಮಾಜಿ ಮುಖ್ಯಮಂತ್ರಿ ಮತ್ತು ರಾಜ್ಯದ ಪ್ರಭಾವಿ ರೈತ ನಾಯಕ ಯಡಿಯೂರಪ್ಪ ಅವರ ಸುದೀರ್ಘ 5 ದಶಕಗಳ ಹೋರಾಟದ ಬದುಕನ್ನು ಸಂಭ್ರಮಸುವ ನಿಟ್ಟಿನಲ್ಲಿ ಇದೇ ಮೇ 9ರಂದು ಚಿತ್ರದುರ್ಗದಲ್ಲಿ ಯಡಿಯೂರಪ್ಪನವರ ಅಭಿಮಾನೋತ್ಸವ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಸಂಜೀವ ರೆಡ್ಡಿ ತಿಳಿಸಿದರು.

ಪಟ್ಟಣದ ಕೂಡ್ಲಿಗಿ ರಸ್ತೆಯಲ್ಲಿರುವ ಪಕ್ಷದ ಕಚೇರಿಯಲ್ಲಿ ಪಕ್ಷದ ವತಿಯಿಂದ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜಿಲ್ಲೆಯಿಂದ 50ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಮತ್ತು ಅಭಿಮಾನಿಗಳು ಭಾಗವಹಿಸುವ ಮೂಲಕ ಯಡಿಯೂರಪ್ಪನವರಿಗೆ ಅಭೂತಪೂರ್ವ ಗೌರವ ಸಲ್ಲಿಸಲಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಯಡಿಯೂರಪ್ಪನವರು ಹೋರಾಟ ಮತ್ತು ಪರಿಶ್ರಮದ ಸಂಕೇತವಾಗಿದ್ದಾರೆ. ಮಹಿಳೆಯರು, ರೈತರು ಮತ್ತು ಬಡವರ ಪರವಾಗಿ ನಿರಂತರವಾಗಿ ಅವರು ನಡೆಸಿದ ಹೋರಾಟಕ್ಕೆ ಐದು ದಶಕಗಳ ಇತಿಹಾಸವಿದೆ. ಪ್ರತ್ಯೇಕ ಕೃಷಿ ಬಜೆಟ್, ಶೂನ್ಯ ಬಡ್ಡಿಯ ಕೃಷಿ ಸಾಲ, ಹೆಣ್ಣು ಮಗು ಎಂದು ಮೂಗು ಮುರಿಯುವವರಿಗೆ ಒದಗಿಸಿದ ಭಾಗ್ಯಲಕ್ಷ್ಮೀ ಯೋಜನೆ ಹಾಗೂ ಮತ್ತಿತರ ಜನಪರ ಯೋಜನೆಗಳು ಅವರನ್ನು ಮುತ್ಸದ್ದಿಯನ್ನಾಗಿಸಿದವು. 50 ವರ್ಷಗಳ ಹೋರಾಟದ ಬದುಕನ್ನು ಸಂಭ್ರಮಿಸಲು ಆಯೋಜಿಸಿರುವ ಬಿ.ಎಸ್.ವೈ. ಅಭಿಮಾನೋತ್ಸವ ಯಶಸ್ವಿಗೊಳಿಸಬೇಕು ಎಂದು ಕೋರಿದರು.



ಜಿಲ್ಲಾ ಬಿಜೆಪಿ ಅಧ್ಯಕ್ಷ ಸಂಜೀವ ರೆಡ್ಡಿ ಮಾತನಾಡಿದರು.

- ಜಿಲ್ಲೆಯಿಂದ 50ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಮತ್ತು ಅಭಿಮಾನಿಗಳು ಭಾಗವಹಿಸುವ ಮೂಲಕ ಯಡಿಯೂರಪ್ಪನವರಿಗೆ ಅಭೂತಪೂರ್ವ ಗೌರವ ಸಲ್ಲಿಸಲಿದ್ದಾರೆ.
- ಯಡಿಯೂರಪ್ಪನವರು ಹೋರಾಟ ಮತ್ತು ಪರಿಶ್ರಮದ ಸಂಕೇತವಾಗಿದ್ದಾರೆ.
- ಮಹಿಳೆಯರು, ರೈತರು ಮತ್ತು ಬಡವರ ಪರವಾಗಿ ನಿರಂತರವಾಗಿ ಅವರು ನಡೆಸಿದ ಹೋರಾಟಕ್ಕೆ ಐದು ದಶಕಗಳ ಇತಿಹಾಸವಿದೆ.

ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಬಲ್ಲಾಹುಣಸಿ ರಾಮಣ್ಣ ಮಾತನಾಡಿ, ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಈಗಾಗಲೇ ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಸಭೆ ನಡೆಸುವ ಮೂಲಕ ಕಾರ್ಯಕರ್ತರಲ್ಲಿ ಸಂಚಲನ ಮೂಡಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಕ್ಷೇತ್ರ ವ್ಯಾಪ್ತಿಯಲ್ಲಿ 100 ಬಸ್ಸುಗಳ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಜೊತೆಗೆ ಮುಖಂಡರು ಮತ್ತು ಕಾರ್ಯಕರ್ತರು ಸ್ವಯಂಪ್ರೇರಿತರಾಗಿ ತಮ್ಮ ತಮ್ಮ ಖಾಸಗಿ ವಾಹನಗಳಲ್ಲಿ ಯಡಿಯೂರಪ್ಪನವರ ಅಭಿಮಾನಿಗಳನ್ನು ಕರೆದೊಯ್ಯಲು ಕಟಿಬದ್ಧರಾಗಿದ್ದಾರೆ. ಕ್ಷೇತ್ರ ವ್ಯಾಪ್ತಿಯಿಂದ 15 ಸಾವಿರಕ್ಕೂ ಹೆಚ್ಚು ಅಭಿಮಾನಿಗಳು ಭಾಗವಹಿಸುವ ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾ ಕಾರ್ಯದರ್ಶಿ ಕನಕಪ್ಪ, ಮಂಡಲ ಅಧ್ಯಕ್ಷ ಬೆಣಕಲ್ ಪ್ರಕಾಶ್, ನಗರ ಘಟಕದ ಅಧ್ಯಕ್ಷ ಮಂಜುನಾಥ್ ಹಿರೇಮಠ್, ಮಂಡಲ ಕಾರ್ಯದರ್ಶಿ ದಿವಾಕರಗೌಡ, ಪುರಸಭೆ ಸದಸ್ಯರಾದ ಸುರೇಶ್ ಬಣಕಾರ್, ನವೀನಕುಮಾರ, ನಾಗರಾಜ ಜನ್ನು, ಅಂಬಳಿ ರವೀಂದ್ರಗೌಡ್, ಸಂದೀಪ್ ಶಿವಮೊಗ್ಗ, ಜಿ.ಕಾಳೇಶ್ ಇದ್ದರು.

> ತುಂಗಭದ್ರಾ ಜಲಾಶಯದ ಎಲ್ಲ 33 ಹೊಸ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾರ್ಯಪೂರ್ಣಗೊಂಡಿದೆ. ಮೇ 15ರೊಳಗೆ ನವೀಕರಣಗೊಂಡ ತುಂಗಭದ್ರಾ ಜಲಾಶಯ ಉದ್ಘಾಟಿಸಲು ಸಾಧ್ಯವೇ ಎನ್ನುವ ಬಗ್ಗೆ ಯೋಚನೆ ಮಾಡುತ್ತಿದ್ದೇವೆ.
> • **ಡಿ.ಕೆ. ಶಿವಕುಮಾರ್** ಉಪಮುಖ್ಯಮಂತ್ರಿ

ಸುದ್ದಿ ಸಿಂಚನ

ಕೆಸಿಎ ಸಂಸ್ಥೆಯ ಕಾರ್ಯದರ್ಶಿಯಾಗಿ ಜಿ.ಬಿ. ಅನಿಲಕುಮಾರ

ಹರಪನಹಳ್ಳಿ: ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಕರ್ನಾಟಕ ಕಲ್ಚರಲ್ ಅಸೋಸಿಯೇಶನ್ ನೂತನ ಕಾರ್ಯದರ್ಶಿಯಾಗಿ ಜಿ.ಬಿ. ಅನಿಲಕುಮಾರ ಆಯ್ಕೆಯಾಗಿದ್ದಾರೆ.ಈವರೆಗೂ ಕಾರ್ಯದರ್ಶಿಯಾಗಿದ್ದ ಎಸ್.ಎಂ. ಸದ್ಯೋಜಾತಯ್ಯನವರು ಈಚೆಗೆ ನಿಧನರಾದ ಹಿನ್ನೆಲೆಯಲ್ಲಿ ಆಡಳಿತ ಮಂಡಳಿ ಸಭೆ ಸೇರಿ ಅನಿಲಕುಮಾರ ಅವರನ್ನು ಸರ್ವಾನುಮತದಿಂದ ಹೊಸದಾಗಿ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಯಿತು. ಸಂಸ್ಥೆಯ ಪರವಾಗಿ ಎಲ್ಲ ಬೋಧಕ, ಬೋಧಕೇತರ ಸಿಬ್ಬಂದಿ ಪರವಾಗಿ ಆಡಳಿತ ಮಂಡಳಿಯಿಂದ ಅಭಿನಂದನೆ ಸಲ್ಲಿಸಲಾಗಿದೆ.

ಬಿಎಸ್‌ವೈ ಹೋರಾಟಕ್ಕೆ 50ರ ಸಂಭ್ರಮ

ಹೂವಿನಹಡಗಲಿ: ರಾಜ್ಯದಲ್ಲಿ ಸಾಮಾಜಿಕ ಸುಧಾರಣೆಗಾಗಿ ನಿರಂತರ ಹೋರಾಟ ಮಾಡಿ, ಬಡವರು, ಮತ್ತು ಮಹಿಳೆಯರಿಗೆ ನ್ಯಾಯ ಒದಗಿಸುವಲ್ಲಿ ಯಶಸ್ವಿಯಾದ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಸಾಮಾಜಿಕ ಹೋರಾಟಕ್ಕೆ 50ರ ಸಂಭ್ರಮದಲ್ಲಿದ್ದಾರೆ. ಮೇ 9ರಂದು ಚಿತ್ರದುರ್ಗದಲ್ಲಿ ಬಿ.ಎಸ್.ವೈ ಅಭಿಮಾನೋತ್ಸವ ಆಚರಿಸಲಾಗುತ್ತಿದೆ ಎಂದು ಶಾಸಕ ಕೃಷ್ಣನಾಯ್ಕ ಹೇಳಿದರು.ಇಲ್ಲಿನ ಶಾಸಕರ ಭವನದಲ್ಲಿ ಜರುಗಿದ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಾ, ಯಡಿಯೂರಪ್ಪ ಅವರ ಅಭಿಮಾನೋತ್ಸವಕ್ಕೆ ಕ್ಷೇತ್ರದಿಂದ 10 ಸಾವಿರಕ್ಕೂ ಹೆಚ್ಚು ಅಭಿಮಾನಿಗಳು ತೆರಳುತ್ತಿದ್ದಾರೆ. ಕ್ಷೇತ್ರದಿಂದ 100 ಸಾರಿಗೆ ಬಸ್, 100 ಖಾಸಗಿ ವಾಹನಗಳನ್ನು ನಿಯೋಜಿಸಲಾಗಿದೆ. ಮಾಜಿ ಶಾಸಕ ನಂದಿಹಳ್ಳಿ ಹಾಲಪ್ಪ, ಬಿಜೆಪಿ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ, ಎಂ.ಪರಮೇಶ್ವರಪ್ಪ, ಡಿ.ಪುನೀತ್, ಎನ್.ಕೋಟೆಪ್ಪ, ಮಂಜುನಾಥ ಜೈನ್, ಚಂದ್ರನಾಯ್ಕ ಇದ್ದರು.

ಅಪ್ರಾಪ್ತೆಯ ಮದುವೆ ತಡೆದು ಸುರಕ್ಷಿತ ಕೇಂದ್ರಕ್ಕೆ ಸ್ಥಳಾಂತರ

ಕಂಪ್ಲಿ: ತಾಲೂಕಿನ ಗ್ರಾಮವೊಂದರಲ್ಲಿ ಭಾನುವಾರ ಬೆಳಿಗ್ಗೆ 8.30ಕ್ಕೆ ನಡೆಯಲು ಯೋಜಿಸಲಾಗಿದ್ದ ಅಪ್ರಾಪ್ತೆಯ ವಿವಾಹವನ್ನು ಪೊಲೀಸರು, ಸಂಬಂಧಿತ ಅಧಿಕಾರಿಗಳು ಸಕಾಲದಲ್ಲಿ ತಡೆದಿದ್ದಾರೆ. ಚೈಲ್ಡ್‌ಲೈನ್ 1098 ಮೂಲಕ ಬಂದ ಮಾಹಿತಿಯ ಆಧಾರದಲ್ಲಿ ತಕ್ಷಣ ಕ್ರಮಕ್ಕೆ ಮುಂದಾದ ಅಧಿಕಾರಿಗಳು, ಸ್ಥಳಕ್ಕೆ ಧಾವಿಸಿ ವಿವಾಹ ನಿಲ್ಲಿಸಿದರು. ಮಾಹಿತಿ ಸಿಕ್ಕ ತಕ್ಷಣವೇ ಪೊಲೀಸ್ ಇಲಾಖೆ ಹಾಗೂ ಮಕ್ಕಳ ಕಲ್ಯಾಣ ವಿಭಾಗದ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿದರು. ಗ್ರಾಮಕ್ಕೆ ತೆರಳಿದ ಅಧಿಕಾರಿಗಳು ಪೋಷಕರಿಗೆ ಅಪ್ರಾಪ್ತೆಯ ವಿವಾಹ ಕಾನೂನುಬಾಹಿರವಾಗಿದೆ. ಇದರಿಂದ ಉಂಟಾಗುವ ಕಾನೂನು ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಿದರು. ನಂತರ ಬಾಲಕಿಯನ್ನು ಸುರಕ್ಷಿತ ವಾತಾವರಣಕ್ಕೆ ಕರೆದೊಯ್ಯುವ ಕ್ರಮ ಕೈಗೊಳ್ಳಲಾಯಿತು. ಅಪ್ರಾಪ್ತೆಗೆ ಅಗತ್ಯ ಸಲಹೆ, ಮಾರ್ಗದರ್ಶನ ಮತ್ತು ರಕ್ಷಣೆ ಒದಗಿಸಲಾಗಿದೆ. ಬಾಲಕಿಯ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಕ್ರಮಗಳನ್ನು ಮಕ್ಕಳ ಕಲ್ಯಾಣ ಸಮಿತಿ ಮೂಲಕ ಕೈಗೊಳ್ಳಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಮಹಿಳಾ ಮೇಲ್ವಿಚಾರಕಿ ಲತೀಫಾಬೇಗಮ್, ಕುಡುತಿನಿ ಪೊಲೀಸ್ ಠಾಣೆಯ ಪಿಎಸ್‌ಐ ವಾಣಿ, ಪೊಲೀಸ್ ಸಿಬ್ಬಂದಿ ಮಂಜುನಾಥ ಗೋಸಬಾಳ, ಚೈಲ್ಡ್‌ಲೈನ್ ಸಿಬ್ಬಂದಿ ಸುಶೀಲ ಹಾಗೂ ಸ್ಥಳೀಯ ಶಾಲೆಯ ಮುಖ್ಯಶಿಕ್ಷಕ ಎಚ್.ಪಿ. ಸೋಮಶೇಖರ ಸೇರಿದಂತೆ ಹಲವರು ಭಾಗವಹಿಸಿದ್ದರು.

ಎರಡು ಪ್ರತ್ಯೇಕ ಪ್ರಕರಣ: ಅಕ್ರಮ ಪಡಿತರ ಅಕ್ಕಿ ವಶ

ಸಿರುಗುಪ್ಪ: ತಾಲೂಕಿನಲ್ಲಿ ನಡೆದ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಅಕ್ರಮವಾಗಿ ಪಡಿತರ ಅಕ್ಕಿಯನ್ನು ಸಾಗಾಟ ಮಾಡುತ್ತಿದ್ದ ವಾಹನಗಳನ್ನು ಆಹಾರ ಇಲಾಖೆ ಸಿಬ್ಬಂದಿ ಹಾಗೂ ಪೊಲೀಸರು ವಶಪಡಿಸಿಕೊಂಡ ಘಟನೆ ಭಾನುವಾರ ನಡೆದಿದೆ. ಖಚಿತ ಮಾಹಿತಿ ಮೇರೆಗೆ ಸಿರುಗುಪ್ಪ ಆಹಾರ ನಿರೀಕ್ಷಕ ವಿಜಯಕುಮಾರ್ ನೇತೃತ್ವದ ತಂಡ ದಾಳಿ ನಡೆಸಿ ತೆಕ್ಕಲಕೋಟೆಯಿಂದ ಸಿರುಗುಪ್ಪ ಮಾರ್ಗವಾಗಿ 35 ರಿಂದ 40 ಕೆಜಿ ತೂಕದ 50 ಚೀಲಗಳಲ್ಲಿ ₹48,500 ಮೌಲ್ಯದ ಪಡಿತರ ಅಕ್ಕಿ ಹಾಗೂ ಬಂಡ್ರಾಲ್ ಗ್ರಾಮದಿಂದ ಸಿಂಧನೂರು ಕಡೆಗೆ ಗೂಡ್ಸ್ ವಾಹನದಲ್ಲಿ 35 ರಿಂದ 40 ಕೆಜಿ ತೂಕದ 90 ಚೀಲಗಳಲ್ಲಿ ₹87, 250 ಸೇರಿದಂತೆ ಒಟ್ಟು ₹1,35,750 ಮೌಲ್ಯದ ಪಡಿತರ ಅಕ್ಕಿಯನ್ನು ವಶಕ್ಕೆ ಪಡೆಲಾಗಿದೆ. ಸಿರುಗುಪ್ಪ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಹರಪನಹಳ್ಳಿ ಕೆಸಿಎ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಯಾಗಿ ಆಯ್ಕೆಯಾದ ಜಿ.ಬಿ. ಅನಿಲಕುಮಾರ ಅವರನ್ನು ಆಡಳಿತ ಮಂಡಳಿ ಅಧ್ಯಕ್ಷರು, ಖಜಾಂಚಿ, ನಿರ್ದೇಶಕರು, ಸಿಬ್ಬಂದಿ ವರ್ಗ ಅಭಿನಂದಿಸಿತು.



ಸಿರುಗುಪ್ಪ ತಾಲೂಕಿನಲ್ಲಿ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ. ಸಿರುಗುಪ್ಪ ಆಹಾರ ನಿರೀಕ್ಷಕ ವಿಜಯಕುಮಾರ್ ಮತ್ತಿತರ ಸಿಬ್ಬಂದಿ ಉಪಸ್ಥಿತರಿದ್ದರು.



ಹೊಸಪೇಟೆ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಪತಂಜಲಿ ಯೋಗ ಸಮಿತಿಯ ಸಹಯೋಗದಲ್ಲಿ ಯೋಗ ಶಿಬಿರ ನಡೆಯಿತು. ಶಿಬಿರ ನಡೆಸಿಕೊಟ್ಟ ವಿವಿಧ ಯೋಗ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮೇ 15ರೊಳಗೆ ನವೀಕೃತ ಟಿಬಿ ಡ್ಯಾಂ ಉದ್ಘಾಟನೆ

ತುಂಗಭದ್ರಾ ಜಲಾಶಯಕ್ಕೆ ಭಾನುವಾರ ಭೇಟಿ ನೀಡಿ ಕ್ರಸ್ಟ್‌ಗೇಟ್ ಕಾರ್ಯ ಪರಿಶೀಲಿಸಿದ ಡಿಸಿಎಂ ಡಿ.ಕೆ. ಶಿವಕುಮಾರ



ಹೊಸಪೇಟೆ ಸಮೀಪದ ತುಂಗಭದ್ರಾ ಜಲಾಶಯಕ್ಕೆಭಾನುವಾರ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

- ಜಲಾಶಯದ ಹೂಳು ತೆಗೆಯುವಾಗ ರೈತರ ಭೂಮಿ ಮತ್ತು ಪರಿಸರಕ್ಕೆ ಹಾನಿಯಾಗದಂತೆ ಜಾಗರೂಕತೆ ವಹಿಸಲಾಗುವುದು.
- ತುಂಗಭದ್ರಾ ಅಣೆಕಟ್ಟಿನ ಸುತ್ತಮುತ್ತಲ ಕೈಗಾರಿಕೆಗಳಿಂದ ರಾಸಾಯನಿಕಯುಕ್ತ ನೀರು ಅಣೆಕಟ್ಟನ್ನು ಸೇರುತ್ತಿರುವ ಬಗ್ಗೆ ವರದಿಗಳು ಬಂದಿವೆ.
- ಈ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು.

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ತುಂಗಭದ್ರಾ ಜಲಾಶಯದ ಎಲ್ಲ 33 ಹೊಸ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾರ್ಯಪೂರ್ಣಗೊಂಡಿದೆ. ಮೇ 15ರೊಳಗೆ ನವೀಕರಣಗೊಂಡ ತುಂಗಭದ್ರಾ ಜಲಾಶಯ ಉದ್ಘಾಟಿಸಲು ಸಾಧ್ಯವೇ ಎನ್ನುವ ಬಗ್ಗೆ ಯೋಚನೆ ಮಾಡುತ್ತಿದ್ದೇವೆ ಎಂದು ಉಪಮುಖ್ಯಮಂತ್ರಿ, ಜನಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಹೇಳಿದರು.

ಸಮೀಪದ ತುಂಗಭದ್ರಾ ಜಲಾಶಯಕ್ಕೆ ಭಾನುವಾರ ಭೇಟಿ ನೀಡಿ ಕ್ರಸ್ಟ್‌ಗೇಟ್ ಕಾರ್ಯ ಪರಿಶೀಲನೆಯ ಆನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಜಲಾಶಯ ಈ ಭಾಗದ ಎರಡೂವರೆ ಲಕ್ಷ ರೈತರ ಬದುಕಿನ ಜೀವನಾಡಿಯಾಗಿದೆ. ಜಲಾಶಯದ 19ನೇ ಕ್ರಸ್ಟ್‌ಗೇಟ್‌ನ ಚೈನ್ ತುಂಡರಿಸಿಕೊಂಡು 2024ರ ಆಗಸ್ಟ್ 10ರಂದು ರಾತ್ರಿ ನೀರಿನಲ್ಲಿ ಕೊಚ್ಚಿಕೊಂಡು ಹೋಗಿತ್ತು. ಕೆಲವೇ ದಿನಗಳಲ್ಲಿ ಜಲಾಶಯದ 19ನೇ ಕ್ರಸ್ಟ್ ಗೇಟ್ ಅಲ್ಲ, ಎಲ್ಲ 33 ಹೊಸ ಕ್ರಸ್ಟ್ ಗೇಟ್‌ಗಳ ಅಳವಡಿಕೆ ನಿರ್ಮಾಣ ಕಾರ್ಯ ಪೂರ್ಣಗೊಳಿಸಲಾಗಿದೆ. ವಿರೋಧ ಪಕ್ಷದವರ ಟೀಕೆಗೆ ಸರಿಯಾದ ಉತ್ತರ ನೀಡಿದ್ದೇವೆ. ತಾಂತ್ರಿಕ ತಂಡ ಕೈಗೊಳ್ಳಲಾದ ತುರ್ತು ದುರಸ್ತಿ ಕಾರ್ಯಗಳು ಈಗ ಅಂತಿಮ ಹಂತಕ್ಕೆ ತಲುಪಿವೆ ಎಂದು ಹೇಳಿದರು.

ಜಲಾಶಯದ 19ನೇ ಗೇಟ್ ಅನಾಹುತಕ್ಕೀಡಾದಾಗ ಸರ್ಕಾರವು ತಕ್ಷಣವೇ ಸ್ಪಂದಿಸಿತ್ತು. ಅಂದು ರಾತ್ರಿಯೇ ಅಧಿಕಾರಿಗಳು ಹಾಗೂ ಸಚಿವರು ಸ್ಥಳಕ್ಕೆ ಧಾವಿಸಿ ತುರ್ತು ಕ್ರಮಗಳನ್ನು ಕೈಗೊಂಡಿದ್ದರು. ಪ್ರಸ್ತುತ ಜಲಾಶಯದ ಎಲ್ಲ 33 ಹೊಸ ಕ್ರಸ್ಟ್‌ಗೇಟ್ ಅಳವಡಿಕೆ ಕಾರ್ಯ ಮುಗಿದಿದ್ದು, ತಾಂತ್ರಿಕ ತಂಡದ ಸಲಹೆಯಂತೆ ಆಧುನೀಕರಣ ಪ್ರಕ್ರಿಯೆ ಮುಂದುವರಿದಿದೆ ಎಂದು ಮಾಹಿತಿ ನೀಡಿದರು.

ಮೊದಲ ಸೆಟ್ ಹೊಸ ಚೈನ್‌ಗಳು ಮೇ 7ರಂದು ಆಗಮಿಸಲಿದ್ದು, ಮೇ ಅಂತ್ಯದೊಳಗೆ ಚೈನ್ ಅಳವಡಿಕೆ ಕಾರ್ಯ ಸಂಪೂರ್ಣ ಪ್ರಕ್ರಿಯೆ ಮುಗಿಯಲಿದೆ. ಮುಂಬರುವ ಮಳೆಗಾಲವನ್ನು ಗಮನದಲ್ಲಿಟ್ಟುಕೊಂಡು ಮೇ 15ರಂದು ಯೋಜನೆಯನ್ನು ಅಧಿಕೃತವಾಗಿ ಉದ್ಘಾಟಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಅತ್ಯಂತ ಕಡಿಮೆ ಸಮಯದಲ್ಲಿ ಹಗಲು, ರಾತ್ರಿ ಕೆಲಸಗಾರರು, ತಜ್ಞರು ಶ್ರಮ ವಹಿಸಿ 33 ಗೇಟ್‌ಗಳನ್ನು ದುರಸ್ತಿಗೊಳಿಸಿದೆ. ಇಡೀ ದೇಶಕ್ಕೆ ಒಂದು ದೊಡ್ಡ ಸವಾಲು, ಮಾದರಿಯಾಗಿದೆ. ಕೇವಲ ಗೇಟ್‌ಗಳ ದುರಸ್ತಿಗೆ ಸುಮಾರು ₹54 ಕೋಟಿ ವೆಚ್ಚ ಮಾಡಲಾಗಿದೆ. ಕಾಲುವೆಗಳ ದುರಸ್ತಿ ಮತ್ತು ಇತರ ಕೆಳಹಂತದ ಕಾಮಗಾರಿಗಳಿಗೆ ₹315 ಕೋಟಿ ವ್ಯಯಿಸಲಾಗಿದೆ. ತಜ್ಞರ ವರದಿಯಂತೆ ಈ ದುರಸ್ತಿ ಕಾರ್ಯದಿಂದಾಗಿ ಜಲಾಶಯದ ಆಯಸ್ಸು ಮುಂದಿನ 50-60 ವರ್ಷಗಳವರೆಗೆ ವೃದ್ಧಿಸಲಿದೆ ಎಂದರು.

ಜಲಾಶಯದ ಹೂಳು ತೆಗೆಯುವಾಗ ರೈತರ ಭೂಮಿ ಮತ್ತು ಪರಿಸರಕ್ಕೆ ಹಾನಿಯಾಗದಂತೆ ಜಾಗರೂಕತೆ ವಹಿಸಲಾಗುವುದು. ತುಂಗಭದ್ರಾ ಅಣೆಕಟ್ಟಿನ ಸುತ್ತಮುತ್ತಲ ಕೈಗಾರಿಕೆಗಳಿಂದ ರಾಸಾಯನಿಕಯುಕ್ತ ನೀರು ಅಣೆಕಟ್ಟನ್ನು ಸೇರುತ್ತಿರುವ ಬಗ್ಗೆ ವರದಿಗಳು ಬಂದಿದ್ದು, ಈ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು. ಅಭಿವೃದ್ಧಿ ಮುಖ್ಯವಾದರೂ ಜನರ ಆರೋಗ್ಯ ಮತ್ತು ಬೆಳೆಗಳ ರಕ್ಷಣೆ ಸರ್ಕಾರದ ಆದ್ಯತೆಯಾಗಿದೆ ಎಂದು ಅವರು ಹೇಳಿದರು.

ಸಚಿವರಾದ ಶಿವರಾಜ ಎಸ್. ತಂಗಡಗಿ, ಈಶ್ವರ ಬಿ. ಖಂಡ್ರೆ, ಕೆ.ಎಚ್. ಮುನಿಯಪ್ಪ, ಸಂಸದರಾದ ಈ.ತುಕಾರಾಂ, ಕೆ. ರಾಜಶೇಖರ ಬಸವರಾಜ ಹಿಟ್ನಾಳ, ಶಾಸಕರಾದ ಎಚ್.ಆರ್. ಗವಿಯಪ್ಪ, ಡಾ.ಎನ್.ಟಿ. ಶ್ರೀನಿವಾಸ ಹಾಗೂ ಅಮರೇಗೌಡ ಪಾಟೀಲ ಬಯ್ಯಾಪುರ, ಜಿಲ್ಲಾಧಿಕಾರಿಗಳಾದ ಕವಿತಾ ಎಸ್. ಮನ್ನಿಕೇರಿ, ಡಾ. ಸುರೇಶ ಬಿ. ಇಟ್ನಾಳ, ಜಿಪಂ ಸಿಇಒಗಳಾದ ನೋಂಗ್ಜಾಯ್ ಮೊಹಮ್ಮದ್ ಅಲಿ ಅಕ್ರಮ್ ಷಾ, ವರ್ಣಿತ್ ನೇಗಿ, ಎಸ್ಪಿಗಳಾದ ಎಸ್. ಜಾಹ್ನವಿ, ಡಾ. ರಾಮ್ ಎಲ್. ಅರಸಿದ್ದಿ, ಎಎಸ್‌ಪಿಗಳಾದ ಮಂಜುನಾಥ, ಆರ್. ಹೇಮಂತಕುಮಾರ್, ಟಿಬಿ ಬೋರ್ಡ್ ಕಾರ್ಯದರ್ಶಿಗಳಾದ ಒ.ಆರ್.ಕೆ. ರೆಡ್ಡಿ, ಮುಖ್ಯ ಎಂಜಿನಿಯರ್‌ಶ್ರೀನಿವಾಸ ಮಲ್ಲಿಗಿವಾಡ, ಎಸ್.ಇ. ನಾರಾಯಣ ನಾಯ್ಕ, ಮುಖಂಡರಾದ ಪಿ. ಗಾದಿಲಿಂಗಪ್ಪ, ಆಂಜನೇಯಲು, ಎಚ್.ಎನ್.ಎಫ್. ಇಮಾಮ್ ನಿಯಾಜಿ ಇದ್ದರು.

ತಮಿಳುನಾಡು ಹೊರತುಪಡಿಸಿ ಉಳಿದ ರಾಜ್ಯಗಳಲ್ಲಿ ಬಿಜೆಪಿಗೆ ಸ್ಪಷ್ಟ ಗೆಲುವು



• **ಕನ್ನಡಪ್ರಭ ವಾರ್ತೆ** ಕಂಪ್ಲಿ

ತಮಿಳುನಾಡು ಹೊರತುಪಡಿಸಿ ಉಳಿದ ರಾಜ್ಯಗಳಲ್ಲಿ ಬಿಜೆಪಿಗೆ ಸ್ಪಷ್ಟವಾದ ಗೆಲುವು ಸಿಗಲಿದೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಹಾಗೂ ದೇಶದ ರಾಜಕೀಯ ಪರಿಸ್ಥಿತಿಯ ಬಗ್ಗೆ ಅಭಿಪ್ರಾಯ ಹಂಚಿಕೊಂಡರು.

ದಾವಣಗೆರೆ, ಬಾಗಲಕೋಟೆ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಭಾರೀ ಹಣ ವ್ಯಯ ಮಾಡಿದ್ದರೂ ಜನರಲ್ಲಿ ಬಿಜೆಪಿ ಪರ ಹವಾ ಇದೆ. ದಾವಣಗೆರೆಯಲ್ಲಿ ಎರಡರಿಂದ ಮೂರು ಸಾವಿರ ಮತಗಳ ಅಂತರದಲ್ಲಿ, ಬಾಗಲಕೋಟೆಯಲ್ಲಿ ಸುಮಾರು ಐದು ಸಾವಿರ ಮತಗಳ ಅಂತರದಲ್ಲಿ ಬಿಜೆಪಿ ಜಯ ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವಾಣಿಜ್ಯ ಅನಿಲದ ದರ ಏರಿಕೆ ಕುರಿತು ಕಾಂಗ್ರೆಸ್ ಅಪಪ್ರಚಾರ ನಡೆಸುತ್ತಿದೆ. ಜಾಗತಿಕ ಪರಿಸ್ಥಿತಿಗಳ ಪರಿಣಾಮವಾಗಿ ದರ ಏರಿಕೆ ಅನಿವಾರ್ಯವಾಗಿದೆ ಎಂದು ಹೇಳಿದರು. ಇರಾನ್, ಅಮೆರಿಕ ನಡುವಿನ ಉದ್ವಿಗ್ನ ಪರಿಸ್ಥಿತಿಯ ಸಮಯದಲ್ಲೇ ದರ ಏರಿಕೆ ಮಾಡಬೇಕಾಗಿತ್ತು. ಆದರೆ ತಾಂತ್ರಿಕ ಕಾರಣಗಳಿಂದ ಅದು ತಡವಾಗಿದೆ ಎಂದರು. ರಾಜ್ಯ ರಾಜಕೀಯದಲ್ಲಿ ವೇಗವಾದ ಬೆಳವಣಿಗೆಗಳು ನಡೆಯುತ್ತಿವೆ. ಮುಖ್ಯಮಂತ್ರಿ ಸ್ಥಾನ ಬದಲಾವಣೆ ಕುರಿತು ವದಂತಿಗಳು ಕೇಳಿಬರುತ್ತಿವೆ. ಡಿ.ಕೆ. ಶಿವಕುಮಾರ್‌ಮುಖ್ಯಮಂತ್ರಿ ಆಗುವ ಸಾಧ್ಯತೆಯ ವಾತಾವರಣ ನಿರ್ಮಾಣವಾಗುತ್ತಿದೆ ಎಂದರು.

ತುಂಗಭದ್ರಾ ಜಲಾಶಯದ ಗೇಟ್‌ಗಳ ದುರಸ್ತಿ ಕಾರ್ಯದಿಂದ ರೈತರು ಒಂದು ಹಂಗಾಮಿನ ಬೆಳೆ ಕಳೆದುಕೊಂಡಿದ್ದಾರೆ. ಹಾನಿಗೊಳಗಾದ ರೈತರಿಗೆ ಎಕರೆಗೆ ₹25 ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರೂ ಸರ್ಕಾರ ಸ್ಪಂದಿಸಿಲ್ಲ. ಜಲಾಶಯದ ಗೇಟ್‌ಗಳಿಗೆ ಸಂಬಂಧಿಸಿದ ಹಳೆಯ ಚೈನ್‌ಗಳು ಇನ್ನು ಬದಲಾಯಿಸದಿರುವುದು ಆತಂಕಕಾರಿ ವಿಷಯ. ಅವು ನೀರಿನ ಒತ್ತಡ ತಾಳದೆ ಮುರಿದು ಬೀಳುವ ಸಾಧ್ಯತೆ ಇದ್ದು, ಇದರಿಂದ ಮತ್ತೊಂದು ಬೆಳೆ ಹಾನಿಯಾಗುವ ಭೀತಿ ಇದೆ. ತಕ್ಷಣವೇ ಅಗತ್ಯ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಮೇ 9ರಂದು ಚಿತ್ರದುರ್ಗನಲ್ಲಿ ನಡೆಯಲಿರುವ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅಭಿನಂದನಾ ಸಮಾರಂಭಕ್ಕೆ ಸುಮಾರು 10 ಲಕ್ಷ ಜನರು ಸೇರುವ ನಿರೀಕ್ಷೆಯಿದೆ. ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗವಹಿಸಲಿದ್ದಾರೆ. ರಾಜ್ಯದ ವಿವಿಧ ಭಾಗಗಳಿಂದ ನಾಯಕರು ಮತ್ತು ಕಾರ್ಯಕರ್ತರು ಭಾಗವಹಿಸಲಿದ್ದು, ಇದು 2028ರ ವಿಧಾನಸಭಾ ಚುನಾವಣೆಗೆ ಒಗ್ಗಟ್ಟಿನ ವೇದಿಕೆಯಾಗಿ ಪರಿಣಮಿಸಲಿದೆ ಎಂದರು. ಜಾತಿಸಮೀಕ್ಷೆಯನಂತರಕ್ಷೇತ್ರ ಪುನರ್ವಿಂಗಡಣೆ ಸಾಧ್ಯತೆ ಎದುರಾಗಬಹುದು ಎಂದರು. ಮಾಜಿ ಶಾಸಕ ಟಿ.ಎಚ್. ಸುರೇಶ್ ಬಾಬು ಇದ್ದರು.

ನವಲಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಬದ್ಧ: ಡಿಸಿಎಂ

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ನವಲಿ ಸಮಾನಾಂತರ ಜಲಾಶಯ ನಿರ್ಮಾಣದ ಬಗ್ಗೆ ನಾವು ಸಿದ್ಧರಿದ್ದೇವೆ. ಆದರೆ ಆಂಧ್ರಪ್ರದೇಶ, ತೆಲಂಗಾಣ ಮುಖ್ಯಮಂತ್ರಿಗಳು ಈ ಕುರಿತು ಮಾತುಕತೆ ನಡೆಸಲು ಸಮಯ ನೀಡುತ್ತಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.


ಸಮೀಪದ ತುಂಗಭದ್ರಾ ಜಲಾಶಯಕ್ಕೆ ಭಾನುವಾರ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳಿಗೆ ಜಲಾಶಯದಿಂದ ನೀರು ಹೋಗುತ್ತಿದೆಯಲ್ಲ, ಅದಕ್ಕೆ ಅವರು ಸುಮ್ಮನೆ ಇದ್ದಾರೆ. ನವಲಿ ಸಮಾನಾಂತರ ಜಲಾಶಯದ ಬಗ್ಗೆ ಮಾತುಕತೆ ಮಾಡಿ ಬಗೆಹರಿಸಿಕೊಳ್ಳೋಣ ಎಂದು ಅವರಲ್ಲಿ ನಾವು ಮನವಿ ಮಾಡಿದ್ದೇವೆ ಎಂದರು.

ಜಲಾಶಯದಲ್ಲಿ 30 ಟಿಎಂಸಿ ಹೂಳು ತುಂಬಿದೆ. ಹೂಳು ತೆಗೆಸುವ ವಿಚಾರ ಮತ್ತು ನವಲಿ ಬಳಿ ಸಮಾನಾಂತರ ಜಲಾಶಯ ನಿರ್ಮಾಣ ಕುರಿತು ಎರಡು ರೀತಿಯಲ್ಲಿ ಚಿಂತನೆ ನಡೆಸಲಾಗುತ್ತಿದೆ. 30 ಟಿಎಂಸಿ ಹೂಳು ತುಂಬಿದ್ದರಿಂದ ಅಷ್ಟು ನೀರನ್ನು ನಷ್ಟ ಅನುಭವಿಸುತ್ತಿದ್ದೇವೆ. ನವಲಿ ಬಳಿ ಹೊಸ ಲಿಫ್ಟ್ ಮಾಡಿ ನೀರು ಸಂಗ್ರಹಿಸುವ ಯೋಜನೆಯೂ ಇದೆ. ಈ ಕುರಿತು ಯೋಜನೆ ಸಿದ್ಧಪಡಿಸಿ ತುಂಗಭದ್ರಾ ಮಂಡಳಿಯಲ್ಲಿ ಚರ್ಚಿಸಲು ಪ್ರಸ್ತಾವನೆ ಇದೆ. ಯಾವ ಸ್ಥಳ ಎಂದು ಈಗಲೇ ಬಹಿರಂಗ ಪಡಿಸುವಂತಿಲ್ಲ. ಸ್ಥಳ ಬಹಿರಂಗ ಪಡಿಸಿದರೆ ಅಲ್ಲಿನ ಜನರನ್ನು ಎತ್ತಿಕಟ್ಟುತ್ತಾರೆ. ಈ ಹಿನ್ನೆಲೆಯಲ್ಲಿ ತುಂಗಭದ್ರಾ ಮಂಡಳಿಯಲ್ಲಿ ಚರ್ಚಿಸಿ ಮತ್ತು ಆಂಧ್ರಪ್ರದೇಶ ಮತ್ತು ತೆಲಂಗಾಣ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲು ಸರ್ಕಾರ ಸಿದ್ಧವಿದೆ. ಆದರೆ ಆಂಧ್ರಪ್ರದೇಶ ಮತ್ತು ತೆಲಂಗಾಣ ಮುಖ್ಯಮಂತ್ರಿಗಳು ಮಾತುಕತೆಗೆ ಮುಂದೆ ಬರುತ್ತಿಲ್ಲ. ಸ್ವಲ್ಪದಿನ ಕಾಯೋಣ ಎಂದರು.

ಜಲಾಶಯ ಹೂಳು ತುಂಬಿರುವ ಕಾರಣ ಅಣೆಕಟ್ಟಿನ ಸಾಮರ್ಥ್ಯ 105 ಟಿಎಂಸಿಯಿಂದ 100 ಟಿಎಂಸಿಗೆ ಇಳಿಕೆಯಾಗಿದೆ. ಹೂಳು ತೆಗೆಯಲು ಚೀನಾ ತಂತ್ರಜ್ಞಾನ ಬಳಕೆಯ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಈ ಕುರಿತು ಗ್ಲೋಬಲ್ ಟೆಂಡರ್‌ಕರೆಯುವ ಬಗ್ಗೆ ಚಿಂತನೆ ನಡೆಸಲಾಗುತ್ತಿದೆ ಎಂದರು.

ಕರ್ನಾಟಕ, ಆಂಧ್ರಪ್ರದೇಶ ರಾಜ್ಯಗಳು 64:34 ಅನುಪಾತದಲ್ಲಿ ಜಲಾಶಯಕ್ಕೆ ಬಂಡವಾಳ ಹೂಡುತ್ತಿದ್ದು, ಡ್ಯಾಂ ಮಂಡಳಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಲಾಗಿದೆ. ಜಲಾಶಯದ 33 ಹೊಸ ಕ್ರಸ್ಟ್‌ಗೇಟ್ ಅಳವಡಿಕೆಯ ಕಾರ್ಯಾಚರಣೆಯು ಇಡೀ ದೇಶಕ್ಕೆ ಒಂದು ದೊಡ್ಡ ಸವಾಲು ಮತ್ತು ತಾಂತ್ರಿಕ ಮಾದರಿಯಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹರ್ಷ ವ್ಯಕ್ತಪಡಿಸಿದರು.



ಹೊಸಪೇಟೆ ಸಮೀಪದ ತುಂಗಭದ್ರಾ ಜಲಾಶಯಕ್ಕೆ ಭಾನುವಾರ ಡಿಸಿಎಂ ಡಿ.ಕೆ. ಶಿವಕುಮಾರ್ ಭೇಟಿ ಪರಿಶೀಲನೆ ನಡೆಸಿದರು.

- ಆಂಧ್ರಪ್ರದೇಶ, ತೆಲಂಗಾಣ ಮುಖ್ಯಮಂತ್ರಿಗಳು ಮಾತುಕತೆಗೆ ಬರುತ್ತಿಲ್ಲ
- ಕ್ರಸ್ಟ್‌ಗೇಟ್ ಅಳವಡಿಕೆಯ ಕಾರ್ಯಾಚರಣೆ ದೇಶಕ್ಕೆ ತಾಂತ್ರಿಕ ಮಾದರಿ
- 30 ಟಿಎಂಸಿ ಹೂಳು ತುಂಬಿದ್ದರಿಂದ ಅಷ್ಟು ನೀರನ್ನು ನಷ್ಟ ಅನುಭವಿಸುತ್ತಿದ್ದೇವೆ.

ಉದ್ಘಾಟನೆ | ಬಳ್ಳಾರಿಯಲ್ಲಿ ನಿರ್ಮಾಣವಾಗಲಿರುವ 100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆಗೆ ವರ್ಚುವಲ್ ಮೂಲಕ ಶಂಕುಸ್ಥಾಪನೆ

ಶ್ರಮಿಕರೇ ದೇಶದ ನಿಜವಾದ ಶಿಲ್ಪಿಗಳು: ಕೇಂದ್ರ ಸಚಿವ

• **ಕನ್ನಡಪ್ರಭ ವಾರ್ತೆ** ಬಳ್ಳಾರಿ

ದೇಶದ ಶ್ರಮಿಕ ವರ್ಗವು ರಾಷ್ಟ್ರ ನಿರ್ಮಾಣದ ನಿಜವಾದ ಶಿಲ್ಪಿಗಳು. ಅವರ ಕಲ್ಯಾಣ, ಸಾಮಾಜಿಕ ಭದ್ರತೆ ಖಚಿತಪಡಿಸುವುದು ಸರ್ಕಾರದ ಆದ್ಯತೆ ಎಂದು ಕೇಂದ್ರ ಕಾರ್ಮಿಕ, ಸಚಿವ ಡಾ.ಮನ್ಸುಖ್ ಮಾಂಡವೀಯ ಹೇಳಿದರು.

ಭಾನುವಾರ ದೊಡ್ಡಬಳ್ಳಾಪುರದಲ್ಲಿ ನೂತನವಾಗಿ ನಿರ್ಮಿಸಲಾದ 100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆಯ ಉದ್ಘಾಟನೆ ಹಾಗೂ ಇದೇ ಸಂದರ್ಭದಲ್ಲಿ ಬಳ್ಳಾರಿಯಲ್ಲಿ ನಿರ್ಮಾಣವಾಗಲಿರುವ 100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆಗೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಉಚಿತ ಆರೋಗ್ಯ ತಪಾಸಣೆ ಅಭಿಯಾನ: ಹೊಸ ಕಾರ್ಮಿಕ ಸಂಹಿತೆಯ ಅಡಿಯಲ್ಲಿ 40 ವರ್ಷ ದಾಟಿದ ಕಾರ್ಮಿಕರಿಗಾಗಿ ಮೇ 7ರಿಂದ ದೇಶಾದ್ಯಂತ ಉಚಿತ ಆರೋಗ್ಯ ತಪಾಸಣೆ ಅಭಿಯಾನವನ್ನು ಪ್ರಾರಂಭಿಸಲಾಗುವುದು ಎಂದು ಸಚಿವರು ಘೋಷಿಸಿದರು.



100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆಯನ್ನು ಉದ್ಘಾಟಿಸಲಾಯಿತು.

ಸಾಮಾಜಿಕ ಭದ್ರತೆಯ ವಿಸ್ತರಣೆ:

2015ರಲ್ಲಿ ಶೇ.19ರಷ್ಟಿದ್ದ ಸಾಮಾಜಿಕ ಭದ್ರತಾ ವ್ಯಾಪ್ತಿಯು ಇಂದು ಶೇ.64ಕ್ಕೆ ಏರಿಕೆಯಾಗಿದೆ. ಇಎಸ್‌ಐ ವಿಮಾದಾರರ ಸಂಖ್ಯೆ 2 ಕೋಟಿಯಿಂದ 4 ಕೋಟಿಗೆ ದ್ವಿಗುಣಗೊಂಡಿದೆ ಎಂದು ಸಚಿವರು ಮಾಹಿತಿ ನೀಡಿದರು.ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ 20 ಇಎಸ್‌ಐ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗಿದ್ದು, ಅಲ್ಲಿ ಶೇ.40-50ರಷ್ಟು ಸೀಟುಗಳನ್ನು ವಿಮಾದಾರರ ಮಕ್ಕಳಿಗಾಗಿಯೇ ಮೀಸಲಿಡಲಾಗಿದೆ ಎಂದರು. ದೊಡ್ಡಬಳ್ಳಾಪುರದ ಭಾಗದಲ್ಲಿ 1.5 ಲಕ್ಷಕ್ಕೂ ಹೆಚ್ಚು ನೋಂದಾಯಿತ ಕಾರ್ಮಿಕರಿದ್ದು, ಅವರ ಕುಟುಂಬದ ಸದಸ್ಯರನ್ನೂ ಸೇರಿ ಒಟ್ಟು 5.5 ಲಕ್ಷ ಜನರಿಗೆ ಈ ಹೊಸ ಆಸ್ಪತ್ರೆಯಿಂದ ಉಚಿತ ವೈದ್ಯಕೀಯ ಸೇವೆ ಲಭ್ಯವಾಗಲಿದೆ. ಬಳ್ಳಾರಿ ವಿಭಾಗದ ಸುಮಾರು 64,000 ಕಾರ್ಮಿಕರು ಮತ್ತು ಅವರ ಕುಟುಂಬದವರು ಸೇರಿ 2 ಲಕ್ಷಕ್ಕೂ ಹೆಚ್ಚು ಜನರಿಗೆ ಉತ್ತಮ ವೈದ್ಯಕೀಯ ಸೇವೆ ಒದಗಿಸಲಿದೆ ಎಂದು ತಿಳಿಸಿದರು.

ಕೇಂದ್ರ ಕಾರ್ಮಿಕ ಮತ್ತು ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಈ ಆಸ್ಪತ್ರೆಯು ಒಪಿಡಿ, ಮಾಡ್ಯುಲರ್ ಆಪರೇಷನ್ ಥಿಯೇಟರ್, ತುರ್ತು ಚಿಕಿತ್ಸೆ, ಸ್ತ್ರೀರೋಗ, ಮಕ್ಕಳ ಆರೋಗ್ಯ ಸೇರಿದಂತೆ ಆಧುನಿಕ ಸೌಲಭ್ಯಗಳನ್ನು ಹೊಂದಿದ್ದು, ಕಾರ್ಮಿಕರ ಜೀವನಮಟ್ಟ ಸುಧಾರಿಸಲು ಸಹಕಾರಿಯಾಗಿದೆ ಎಂದರು. ಆಸ್ಪತ್ರೆಯ ನಿರ್ಮಾಣದಲ್ಲಿ ಶ್ರಮಿಸಿದ ಕಾರ್ಮಿಕರನ್ನು ಸಚಿವರು ಗೌರವಿಸಿದರು. ಫಲಾನುಭವಿಗಳಿಗೆ ಇಎಸ್‌ಐ ಸೌಲಭ್ಯಗಳ ಚೆಕ್ ವಿತರಿಸಿದರು.

ಸಂಸದ ಡಾ.ಕೆ.ಸುಧಾಕರ್, ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜು ಸೇರಿದಂತೆ ಹಲವು ಗಣ್ಯರು ಹಾಗೂ ವರ್ಚುವಲ್ ಮೂಲಕ ಬಳ್ಳಾರಿಯ ಇಎಸ್‌ಐ ಅಧಿಕಾರಿಗಳು ಉಪಸ್ಥಿತರಿದ್ದರು.

ಆಸ್ಪತ್ರೆಗಳ ವಿಶೇಷತೆ: ದೊಡ್ಡಬಳ್ಳಾಪುರದ ಇಎಸ್‌ಐ ಆಸ್ಪತ್ರೆಯನ್ನು ₹101.14 ಕೋಟಿ ವೆಚ್ಚದಲ್ಲಿ 5 ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗಿದೆ. ಸಾಮಾನ್ಯ ಔಷಧ ವಿಭಾಗ, ಶಸ್ತ್ರಚಿಕಿತ್ಸೆ, ಸ್ತ್ರೀರೋಗ ಮತ್ತು ಪ್ರಸೂತಿ, ಮಕ್ಕಳ ವಿಭಾಗ, ಮೂಳೆಚಿಕಿತ್ಸೆ, ತುರ್ತು ಚಿಕಿತ್ಸೆ, ರೇಡಿಯಾಲಜಿ ಮತ್ತು ಸುಸಜ್ಜಿತ ಪ್ರಯೋಗಾಲಯಗಳು ಒಳಗೊಂಡಿದೆ. ಆಸ್ಪತ್ರೆ ಆವರಣದಲ್ಲಿ ಸಿಬ್ಬಂದಿಗಾಗಿ 32 ವಸತಿಗೃಹಗಳನ್ನು ನಿರ್ಮಿಸಲಾಗಿದೆ.

ಅದೇರೀತಿ ಬಳ್ಳಾರಿಯಲ್ಲಿ ನಿರ್ಮಾಣವಾಗಲಿರುವ ಆಸ್ಪತ್ರೆಗೆ ₹150 ಕೋಟಿ ವೆಚ್ಚವಾಗಲಿದ್ದು, 5.21 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ತಲೆಯೆತ್ತಲಿದೆ. ಇದು ಉತ್ತರ ಕರ್ನಾಟಕದ ಕಾರ್ಮಿಕರಿಗೆ ವರದಾನವಾಗಲಿದೆ.

ಶೃಂಗೇರಿಯ ಅಂಚೆ ಮತ ಎಣಿಕೆಯಲ್ಲಿ ಕುತಂತ್ರ: ಡಿಕೆಶಿ

• **ಕನ್ನಡಪ್ರಭ ವಾರ್ತೆ** ಹೊಸಪೇಟೆ



ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ವಿಧಾನ ಸಭಾ ಕ್ಷೇತ್ರದ ಅಂಚೆ ಮತಗಳ ಎಣಿಕೆ ವಿಚಾರದಲ್ಲಿ ಬಹಳ ದೊಡ್ಡಮಟ್ಟದ ಅಪರಾಧ ನಡೆದಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆರೋಪಿಸಿದರು. ಸಮೀಪದ ತುಂಗಭದ್ರಾ ಜಲಾಶಯಕ್ಕೆ ಭಾನುವಾರ ಭೇಟಿ ನೀಡಿದ್ದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ಬಿಜೆಪಿಯವರು ಮಾಜಿ ಶಾಸಕರನ್ನು, ಕೆಲವು ಅಧಿಕಾರಿಗಳನ್ನು ಉಪಯೋಗಿಸಿ ಕೊಂಡು ನಮ್ಮ ಅಭ್ಯರ್ಥಿಗೆ ಬಂದಂತಹ ಮತಗಳ ಮೇಲೆ ತಿರುಗಾ ಬಂಡಲ್ ತೆಗೆದುಕೊಂಡು ಬೇರೆ ಪೆನ್ನಿನಿಂದ ಮಾರ್ಕ್ ಮಾಡಿ 200ಕ್ಕೂ ಹೆಚ್ಚು ಮತಗಳನ್ನು ತಿದ್ದಿದ್ದಾರೆ. ಇದು ಇಡೀ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಒಂದು ದೊಡ್ಡ ಕಳಂಕವಾಗಿದೆ. ಇದರ ಬಗ್ಗೆ ದೊಡ್ಡ ತನಿಖೆ ನಡೆಯಬೇಕಾಗಿದೆ. ಇದನ್ನು ನಾವು ಕಾನೂನು ಚೌಕಟ್ಟಿನಲ್ಲಿ ನ್ಯಾಯಾಲಯದಲ್ಲಿ ಪ್ರಶ್ನಿಸಲಿ ದ್ದೇವೆ ಎಂದರು. ಅಂಚೆ ಮತಗಳ ಎಣಿಕೆಯ ನಂತರ ಅವರ ಏಜೆಂಟ್, ನಮ್ಮ ಏಜೆಂಟ್‌ಗಳು ಸೇರಿದಂತೆ ಅಧಿಕಾರಿಗಳು ಸಹಿ ಮಾಡಿದ್ದಾರೆ. ಈ ರೀತಿ ನಡೆದಿರುವುದು ಇಡೀ ದೇಶಕ್ಕೆ ದೊಡ್ಡ ಕಳಂಕವಾಗಿದೆ. ಚುನಾವಣೆಯ ವ್ಯವಸ್ಥೆ ಮತ್ತು ಪ್ರಜಾಪ್ರಭುತ್ವದ ವ್ಯವಸ್ಥೆಗೆ ಒಂದು ದೊಡ್ಡ ಕಳಂಕ. ಇದರಿಂದ ಎಲ್ಲ ರಾಜಕೀಯ ಪಕ್ಷಗಳು ಇದರಿಂದ ಬಹಳ ಹುಷಾರಾಗಿರಬೇಕು. ಈ ರೀತಿ ಒಳಗಡೆ ಸಂಚು ಮಾಡಿ ನಮ್ಮ ಶಾಸಕರಿಗೆ ಬಂದಂತಹ ಮತಗಳ ಮೇಲೆ ಇನ್ನೊಂದು ಮಾರ್ಕ್ ಮಾಡಿ ಇನ್‌ವ್ಯಾಲಿಡ್ ಮಾಡಬೇಕು ಎಂದು ಒಂದು ದೊಡ್ಡ ಕುತಂತ್ರ ಮಾಡಿದ್ದಾರೆ ಎಂದರು.